# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1014

ಸದಸ್ಯರ ಹೆಸರು : ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 23.02.2024

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳು ಸ್ಥಳೀಯ ಸರ್ಕಾರಗಳಾಗಬೇಕೆಂಬ ಉದ್ದೇಶದಿಂದ ಗ್ರಾಮ ಪಂಚಾಯಿತಿಗಳಿಗೆ 29 ಇಲಾಖೆಗಳ ಜವಾಬ್ದಾರಿ ನೀಡಲು ಬಜೆಟ್‌ನಲ್ಲಿ ಘೋಷಣೆಯಾಗಿದ್ದು, ಇಲಾಖೆಗಳ ಜವಾಬ್ದಾರಿಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಯೋಜನೆ ಅನುಷ್ಠಾನಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೇ ಮಾಡುವುದರಿಂದ ಗ್ರಾಮಗಳು ಸಮಗ್ರ ಅಭಿವೃದ್ಧಿ ಹೊಂದಲು ಸಾಧ್ಯವಿರುವುದರಿಂದ ಗ್ರಾಮ ಪಂಚಾಯಿತಿಗಳಿಗೆ 29 ಇಲಾಖೆಗಳ ಜವಾಬ್ದಾರಿ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು) | ಮಾನ್ಯ ಮುಖ್ಯಮಂತ್ರಿಯವರು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿ ಹೊಂದಿರಬಹುದಾದ ಕಾರ್ಯ ಹಂಚಿಕೆಯ ಜವಾಬ್ದಾರಿ ನಕ್ಷೆಯನ್ನು ನಿರ್ದಿಷ್ಟಪಡಿಸಲು ಕ್ರಮ ವಹಿಸಲಾಗುತ್ತಿದೆ.<br><br>ಜವಾಬ್ದಾರಿ ನಕ್ಷೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ತಯಾರಿಸಿ, ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ಸಹಮತಿಗಾಗಿ ಕಳುಹಿಸಲಾಗಿದೆ. ಈ ಬಗ್ಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂಚಾಯತ್ ರಾಜ್) ರವರ ಅಧ್ಯಕ್ಷತೆಯಲ್ಲಿ ಸಂಬಂಧಿಸಿದ ಇಲಾಖೆಗಳ ಜೊತೆ ಸಭೆಯನ್ನು ನಡೆಸಲಾಗಿದೆ ಮತ್ತು ಜವಾಬ್ದಾರಿ ನಕ್ಷೆಯ ಪ್ರಾಮುಖ್ಯತೆಯನ್ನು ಇಲಾಖೆಗಳಿಗೆ ತಿಳಿಸಲಾಗಿದೆ. ಇದಲ್ಲದೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ 2 ಸಭೆಗಳನ್ನು ನಡೆಸಲಾಗಿದೆ. ಸರ್ಕಾರದ ಹಂತದಲ್ಲಿಯೂ ಕೂಡ ಸಭೆಯನ್ನು ನಡೆಸಿ ಶೀಘ್ರವಾಗಿ ತಮ್ಮ ಅಭಿಪ್ರಾಯವನ್ನು ತಿಳಿಸುವಂತೆ ಎಲ್ಲಾ ಸಂಬಂಧಿಸಿದ ಇಲಾಖೆಗಳಿಗೆ ಸೂಚಿಸಲಾಗಿದೆ. ಈ ನಿಟ್ಟಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಪಶುಸಂಗೋಪನೆ ಇಲಾಖೆಗಳು ತಮ್ಮ ಅಭಿಪ್ರಾಯವನ್ನು ತಿಳಿಸಿರುತ್ತಾರೆ. ಈ ಬಗ್ಗೆ ಇತರ ಇಲಾಖೆಗಳಿಂದ ಮಾಹಿತಿಯನ್ನು ಪಡೆದು ಜವಾಬ್ದಾರಿ ನಕ್ಷೆಯನ್ನು ಅಧಿಸೂಚಿಸಲಾಗುವುದು. |

ಸಂಖ್ಯೆ: ಗ್ರಾಅಪ 113 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.